## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹನುಮಂತರಾಯಪ್ಪ, ಸದಸ್ಯರು, ಹಾಲೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ: 02.02.2019.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ರವರ ಪತ್ರ ಸಂಖ್ಯೆ: ಗ್ರಾಅಪ 822 ಗ್ರಾಪಂಅ 2018, ದಿನಾಂಕ:22.02.2019.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರು ಪತ್ರ ಸಂಖ್ಯೆ:ತುಜಿಪ/ಅಭಿ/ವಿವ-3/ಗೈರುಹಾಜರಿ/289/2017-18, ದಿನಾಂಕ:19.07.2018.
4. ಪ್ರಾದೇಶಿಕರ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ಪತ್ರ ಸಂಖ್ಯೆ: ಪ್ರಾಆಕ/ಅಭಿವೃದ್ಧಿ/ಸಿಆರ್/18/2019-20, ದಿನಾಂಕ:11.12.2019.

**ಪ್ರಸ್ತಾವನೆ:**

ಶ್ರೀ ಹನುಮಂತರಾಯಪ್ಪ, ಸದಸ್ಯರು, ಹಾಲೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ರವರು ಹಾಲೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಾಡಿರುವ ಅವ್ಯವಹಾರಗಳ ಬಗ್ಗೆ ಉಲ್ಲೇಖ (1) ಮತ್ತು (2) ರ ಆದೇಶಗಳ ಸೂಚನೆಯಂತೆ ವಿಚಾರಣೆ ನಡೆಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿತ್ತು. ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರು ಆರೋಪಿತ ಸದಸ್ಯರ ವಿರುದ್ಧ ಇದಂತಹ ಆರೋಪಗಳ ಬಗ್ಗೆ ವಿಚಾರಣೆ ಮಾಡಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವಂತೆ ಮೇಲೆ ಓದಲಾದ (3) ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಹಾಗೂ ವಿಚಾರಣಾಧಿಕಾರಿಗಳು ಇವರು ವಿಚಾರಣಾ ವರದಿಯಲ್ಲಿ ಶ್ರೀ ಹನುಮಂತರಾಯಪ್ಪ ರವರು ದಿನಾಂಕ:06.01.2017 ರಿಂದ 20.09.2017 ರವರೆಗೆ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಗಳಿಗೆ ಸತತವಾಗಿ 8 ಭಾರಿ ಗೈರು ಹಾಜರಾಗಿದ್ದು, ಅವರ ವಿರುದ್ಧ ಮಾಡಲಾಗಿರುವ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಕಲಂ 43(ಎ) ರನ್ವಯ ಕ್ರಮಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ರವರು ಶಿಫಾರಸ್ಸು ಮಾಡಿರುತ್ತಾರೆ.

ಪ್ರಸ್ತಾವನೆ ಪರಿಶೀಲಿಸಲು ಪುನ: ದಿನಾಂಕ:03.09.2019 ರಂದು ನೋಟೀಸ್ ಜಾರಿ ಮಾಡಿದ್ದು, ಶ್ರೀ ಹನುಮಂತರಾಯಪ್ಪ ರವರು ದಿನಾಂಕ:26.07.2019 ರಂದು ನಡೆದ ವಿಚಾರಣೆ ವೇಳೆಯಲ್ಲಿ ತಮಗೆ ಅನಾರೋಗ್ಯದ ಕಾರಣ ಬೆಂಗಳೂರಿನ ಲಗ್ಗೆರೆಯ ಶ್ರೀ ಸಾಯಿ ಬಾಬಾ ಆಸ್ಪತ್ರೆ ಹಾಗೂ ಶಿರಾದ ರಾಮಕೃಷ್ಣ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಲಿಖಿತ ಮನವಿ ಸಲ್ಲಿಸಿರುವುದಾಗಿ ತಿಳಿಸಿ ದಿನಾಂಕ:19.10.2017, 24.08.2017 ಮತ್ತು 15.04.2017 ರಂದು ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಮನವಿ ಸಲ್ಲಿಸಿರುವುದಾಗಿ ತಿಳಿಸುತ್ತಾ, ದಿನಾಂಕ:06.01.2017 ರಿಂದ 11.06.2017 ರ ಅವಧಿಯಲ್ಲಿ ನಡೆದ ಗ್ರಾಮ ಪಂಚಾಯಿತಿ ಸಾಮನ್ಯ ಸಭೆಗಳಿಗೆ ಉದ್ದೇಶ ಪೂರ್ವಕವಾಗಿ ಗೈರು ಹಾಜರಾಗಿರುವುದಿಲ್ಲವೆಂದು ಇನ್ನು ಮುಂದೆ ಸಾಮಾನ್ಯ ಸಭೆಗಳಿಗೆ ಹಾಜರಾಗಿ ನಿಯಮಾನುಸಾರ ಕರ್ತವ್ಯ ನಿರ್ವಹಿಸುವುದಾಗಿ ತಿಳಿಸಿರುತ್ತಾರೆ. ಸದಸ್ಯರ ಮನವಿಯನ್ನು ಪರಿಶೀಲಿಸಲಾಗಿ, ಸದಸ್ಯರು ಗ್ರಾಮ

...2

ಪಂಚಾಯಿತಿಯಲ್ಲಿ ದಿನಾಂಕ:06.01.2017, 10.03.2017, 18.04.2017, 22.06.2017, 04.08.2017, 26.08.2017, 11.10.2017 ಮತ್ತು 27.11.2017 ರಂದು ನಡೆದ ಒಟ್ಟು 8 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಹಾಗೂ ಅವರ ಸಮಜಾಯಿಷಿ ಸಮರ್ಥನೆವಾಗಿರದ ಕಾರಣ ಈ ಹಿನ್ನೆಲೆಯಲ್ಲಿ ಶ್ರೀ ಹನುಮಂತರಾಯಪ್ಪ, ಸದಸ್ಯರು, ಹಾಲೇನಹಳ್ಳಿ ಗ್ರಾಮ ಪಂಚಾಯಿತಿ ರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಕಲಂ 43(ಎ)(iii) ರನ್ವಯ ಕ್ರಮ ಜರುಗಿಸಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/48/ಗ್ರಾಪಂಅ/2020</u>**
**<u>ಬೆಂಗಳೂರು, ದಿನಾಂಕ: 18-02-2020.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಹನುಮಂತರಾಯಪ್ಪ, ಸದಸ್ಯರು, ಹಾಲೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ ರವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(iii) ರನ್ವಯ ಸದರಿ ಗ್ರಾಮ ಪಂಚಾಯತ್‌ನ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 18/2/2020
(ನವೀನ್‌ಕುಮಾರ್ ಬಿ.)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18.2.2020

<u>ಗೆ:</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಶಿರಾ, ತುಮಕೂರು ಜಿಲ್ಲೆ.
3) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಾಲೇನಹಳ್ಳಿ ಗ್ರಾಮ ಪಂಚಾಯಿತಿ, ಶಿರಾ ತಾಲ್ಲೂಕು, ತುಮಕೂರು ಜಿಲ್ಲೆ.
4) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಶಿರಾ, ತುಮಕೂರು ಜಿಲ್ಲೆ ರವರ ಮುಖಾಂತರ)
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.